ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 1331
2. ಸದಸ್ಯರ ಹೆಸರು ಶ್ರೀ ನಸೀರ್ ಅಹ್ಮದ್ (ವಿಧಾನ ಸಭೆಯಿಂದ ಚುನಾಯಿತರಾದವರು)
3. ಉತ್ತರಿಸಬೇಕಾದ ದಿನಾಂಕ 23.09.2021
4. ಉತ್ತರಿಸುವ ಸಚಿವರು ಮಾನ್ಯ ಮುಖ್ಯ ಮಂತ್ರಿಯವರು

ಕ್ರ.ಸಂ	ಪ್ರಶ್ನೆ	ಉತ್ತರ
1.	ಅ) ದಿನಾಂಕ: 01.07.1984ರ ನಂತರ ದಿನಗೂಲಿ ನೌಕರರಾಗಿ ಸೇರಿದ್ದ ನೌಕರರಿಗೆ ಸಂಬಂಧಪಟ್ಟಂತೆ ಸುಪ್ರೀಂ ಕೋರ್ಟ್ ಆದೇಶ ಸಂಖ್ಯೆ: ಸಿಎ ನಂ.3595-3612/1999 ದಿನಾಂಕ: 10.04.2006 ರೀತ್ಯಾ ಸರ್ಕಾರವು ಕೈಗೊಂಡಿರುವ ಕ್ರಮ ಮತ್ತು ಹೊರಡಿಸಿರುವ ಸುತ್ತೋಲೆಗಳ ಪ್ರತಿಗಳನ್ನು ನೀಡುವುದು;	ದಿನಾಂಕ: 01.07.1984ರ ನಂತರ ದಿನಗೂಲಿ ನೌಕರರಾಗಿ ಸೇರಿದ್ದ ನೌಕರರಿಗೆ ಸಂಬಂಧಪಟ್ಟಂತೆ ಮಾನ್ಯ ಸರ್ವೋಚ್ಚ ನ್ಯಾಯಾಲಯವು ಉಮಾದೇವಿ ಪ್ರಕರಣದಲ್ಲಿ ದಿನಾಂಕ: 10.04.2006 ರಂದು ನೀಡಿರುವ ತೀರ್ಪಿನ ಹಿನ್ನೆಲೆಯಲ್ಲಿ ಸರ್ಕಾರವು ಈ ಕೆಳಕಂಡ ಸುತ್ತೋಲೆಗಳನ್ನು ಹೊರಡಿಸಿರುತ್ತದೆ. (ಪ್ರತಿಗಳನ್ನು ಅನುಬಂಧದಲ್ಲಿ ಒದಗಿಸಿದೆ) 1. ಸಿಆಸುಇ 25 ಸೇಸ್ಥಲ 2003, ದಿನಾಂಕ: 25.05.2006 2. ಸಿಆಸುಇ 25 ಸೇಸ್ಥಲ 2003, ದಿನಾಂಕ: 06.07.2006 3. ಸಿಆಸುಇ 25 ಸೇಸ್ಥಲ 2003(ಭಾ), ದಿನಾಂಕ: 13.11.2006 ಉಮಾದೇವಿ ಪ್ರಕರಣದ ತೀರ್ಪಿನ ಪರಿಣಾಮಗಳನ್ನು ಪರಿಶೀಲಿಸಿ ದಿನಗೂಲಿ ನೌಕರರ ಸೇವಾ ಸಕ್ರಮಾತಿಗೆ ಸಂಬಂಧಿಸಿದಂತೆ ಸಚಿವ ಸಂಪುಟ ಉಪ ಸಮಿತಿಯ ಶಿಫಾರಸ್ಸಿನ ಮೇರೆಗೆ ಸರ್ಕಾರವು ಕರ್ನಾಟಕ ದಿನಗೂಲಿ ನೌಕರರ ಕ್ಷೇಮಾಭಿವೃದ್ಧಿ ಅಧಿನಿಯಮ-2012 ಅನ್ನು ಜಾರಿಗೆ ತಂದಿರುತ್ತದೆ.
2.	ಆ) ಸದರಿ ಆದೇಶದ ರೀತ್ಯಾ ವಾಣಿಜ್ಯ ತೆರಿಗೆ ಇಲಾಖೆಗೆ ಸಂಬಂಧಪಟ್ಟಂತೆ ಕೈಗೊಂಡಿರುವ ಕ್ರಮಗಳೇನು ಹಾಗೂ ಈ ಸಂಬಂಧ ಆರ್ಥಿಕ ಇಲಾಖೆಯವರು ನೀಡಿರುವ ಅಭಿಪ್ರಾಯವೇನು ಮಾಹಿತಿ ಒದಗಿಸುವುದು	ಮಾನ್ಯ ಸರ್ವೋಚ್ಚ ನ್ಯಾಯಾಲಯದ ದಿನಾಂಕ: 10.04.2006ರ ಆದೇಶಾನುಸಾರ ಸರ್ಕಾರದ ಸುತ್ತೋಲೆ ಸಂಖ್ಯೆ: ಸಿಆಸುಇ 25 ಸೇಸ್ಥಲ 2003, ದಿನಾಂಕ: 25.05.2006ರನ್ವಯ ಇಲಾಖೆಯ ದಿನಗೂಲಿ ನೌಕರರು 4 ಷರತ್ತುಗಳನ್ನು ಪೂರೈಸಿದ್ದ ಹಿನ್ನೆಲೆಯಲ್ಲಿ ಆಯುಕ್ತರ ದಿನಾಂಕ: 10.08.2006/6.01.2007ರ ಅಧಿಕೃತ ಜ್ಞಾಪನಗಳನ್ವಯ 189 ದ್ವಿತೀಯ ದರ್ಜೆ ಸಹಾಯಕರು, 142

		ಬೆರಳಚ್ಚುಗಾರರು ಮತ್ತು 17 ಶೀಘ್ರಲಿಪಿಗಾರರು, ಒಟ್ಟು 353 ದಿನಗೂಲಿ ನೌಕರರನ್ನು ಸಕ್ರಮಗೊಳಿಸಲಾಗಿರುತ್ತದೆ ಎಂಬ ಮಾಹಿತಿಯನ್ನು ಆರ್ಥಿಕ ಇಲಾಖೆ ಒದಗಿಸಿದೆ.
3.	ಇ) ಸುಪ್ರೀಂ ಕೋರ್ಟ್ ತೀರ್ಪಿನ ಪ್ಯಾರಾ ಸಂಖ್ಯೆ: 46ರಲ್ಲಿರುವಂತೆ ವಯೋಮಿತಿಯಲ್ಲಿ ಸಡಿಲಿಕೆ ಮತ್ತು ವೈಟೇಜ್ ನೀಡಿ ವಾಣಿಜ್ಯ ತೆರಿಗೆ ಇಲಾಖೆಯಲ್ಲಿ ದಿನಗೂಲಿ ನೌಕರರ ನೇಮಕಾತಿ ಪ್ರಕ್ರಿಯೆಯನ್ನು ಕೈಗೊಳ್ಳಬೇಕೆಂದು ಸರ್ಕಾರ ಆದೇಶ ಹೊರಡಿಸಲಾಗಿದೆಯೇ;	ದಿನಾಂಕ:25.05.2006ರ ಸರ್ಕಾರದ ಸುತ್ತೋಲೆ ಸಂಖ್ಯೆ: ಸಿಆಸುಇ 25 ಸೇಸ್ಥಲ 2003ಯು ಮಾನ್ಯ ಸರ್ವೋಚ್ಚ ನ್ಯಾಯಾಲಯವು ದಿನಾಂಕ: 10.04.2006ರಂದು ನೀಡಿರುವ ತೀರ್ಪಿನ ಪ್ಯಾರ 44ರಲ್ಲಿ ಕಾಣಿಸಿರುವ ಸೂಚನೆಗಳನ್ನು ಒಳಗೊಂಡಿರುತ್ತದೆ. ಅದರನ್ವಯ ಮಾನ್ಯ ಸರ್ವೋಚ್ಚ ನ್ಯಾಯಾಲಯದ ತೀರ್ಪಿನ ಷರತ್ತುಗಳನ್ನು ಪೂರೈಸಿದ ಇಲಾಖೆಯ ದಿನಗೂಲಿ ನೌಕರರನ್ನು ಸಕ್ರಮಗೊಳಿಸಲಾಗಿರುತ್ತದೆ ಎಂಬ ಮಾಹಿತಿಯನ್ನು ಆರ್ಥಿಕ ಇಲಾಖೆ ಒದಗಿಸಿದೆ.
4.	ಈ) ಸುಪ್ರೀಂ ಕೋರ್ಟ್ ಆದೇಶ ಉಲ್ಲಂಘಿಸಿ ದಿನಗೂಲಿ ನೌಕರರಿಗೆ ಹಿಂದಿನ ದಿನಾಂಕಕ್ಕೆ ಜೇಷ್ಠತೆಯನ್ನು ನಿಗಧಿಪಡಿಸಿ ಸಕ್ರಮಾತಿ ಮಾಡಿರುವ ಲೋಪವನ್ನು ಸರಿಪಡಿಸಬೇಕೆಂದು ಪ್ರಕರಣ ಸಂಖ್ಯೆ: 131/2016ರಲ್ಲಿ ಕರ್ನಾಟಕ ರಾಜ್ಯ ಅನುಸೂಚಿತ ಜಾತಿಗಳ ಮತ್ತು ಅನುಸೂಚಿತ ಬುಡಕಟ್ಟುಗಳ ಆಯೋಗದಿಂದ ತೀರ್ಪು ನೀಡಿರುವ ವಿಚಾರವು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಕೈಗೊಂಡಿರುವ ಕ್ರಮಗಳೇನು?	ಕ್ರ.ಸಂ.(2)ರ ಉತ್ತರದಲ್ಲಿ ಉಲ್ಲೇಖಿಸಲಾದ ಅಧಿಕೃತ ಜ್ಞಾಪನಗಳನ್ವಯ ಸಕ್ರಮಗೊಂಡ ನೌಕರರು ಸೇವಾ ಜೇಷ್ಠತೆಯನ್ನು ಕೋರಿ ಸಲ್ಲಿಸಿದ್ದ ಅರ್ಜಿಯನ್ನು ಮಾನ್ಯ ಕರ್ನಾಟಕ ಆಡಳಿತ ನ್ಯಾಯ ಮಂಡಳಿಯು ದಿನಾಂಕ:10.01.2013ರ ಆದೇಶದಲ್ಲಿ ಮಾನ್ಯ ಮಾಡಿರುತ್ತದೆ. ಮುಂದುವರೆದು, ಮಾನ್ಯ ನ್ಯಾಯ ಮಂಡಳಿಯ ಆದೇಶವನ್ನು ಪ್ರಶ್ನಿಸಿ ಸರ್ಕಾರವು ಸಲ್ಲಿಸಿದ್ದ ರಿಟ್ ಅರ್ಜಿಗೆ ಸಂಬಂಧಿಸಿದಂತೆ ಮಾನ್ಯ ಉಚ್ಚ ನ್ಯಾಯಾಲಯವು ದಿನಾಂಕ:03.07.2013ರ ತೀರ್ಪಿನಲ್ಲಿ ನ್ಯಾಯ ಮಂಡಳಿಯ ಆದೇಶವನ್ನು ಎತ್ತಿ ಹಿಡಿದಿರುತ್ತದೆ. ತದನಂತರ ಮಾನ್ಯ ಸರ್ವೋಚ್ಚ ನ್ಯಾಯಾಲಯದಲ್ಲಿ ಸರ್ಕಾರವು ಸಲ್ಲಿಸಿದ್ದ ವಿಶೇಷ ಅನುಜ್ಞೆ ಅರ್ಜಿಗೆ ಸಂಬಂಧಿಸಿದಂತೆ ದಿನಾಂಕ 25.11.2013ರಂದು ಮಾನ್ಯ ಸರ್ವೋಚ್ಚ ನ್ಯಾಯಾಲಯವು ಕೆಳಕಂಡಂತೆ ತೀರ್ಪನ್ನು ನೀಡಿರುತ್ತದೆ. ***"Heard Mr. Patil, learned senior counsel in support of this special leave petition. <u>We do not see any error in the order passed by the high Court. The special leave petition is dismissed</u>".***

		ಮಾನ್ಯ ಸರ್ವೋಚ್ಚ ನ್ಯಾಯಾಲಯದ ದಿನಾಂಕ: 25.11.2013ರ ಆದೇಶದ ವಿರುದ್ಧ ಮೇಲ್ಮನವಿ ಸಲ್ಲಿಸುವ ಅಗತ್ಯವಿಲ್ಲವೆಂದು ಸರ್ಕಾರವು ತೀರ್ಮಾನಿಸಿರುತ್ತದೆ. ಸೇವಾ ಜೇಷ್ಠತೆಗೆ ಸಂಬಂಧಿಸಿದಂತೆ ಅಂತಿಮ ನ್ಯಾಯಾಲಯದ ಆದೇಶದ ಹಿನ್ನೆಲೆಯಲ್ಲಿ ವಾಣಿಜ್ಯ ತೆರಿಗೆಗಳ ಇಲಾಖೆಯಲ್ಲಿ ದಿನಾಂಕ: 01.07.1984ರ ನಂತರ ದಿನಗೂಲಿ ಆಧಾರದ ಮೇಲೆ ನೇಮಕಗೊಂಡು ನಂತರ ಶ್ರೀಮತಿ ಉಮಾದೇವಿ ಮತ್ತು ಇತರರ ಪ್ರಕರಣದಲ್ಲಿ ಮಾನ್ಯ ಸರ್ವೋಚ್ಚ ನ್ಯಾಯಾಲಯವು ನೀಡಿದ ತೀರ್ಪಿನ ಹಿನ್ನಲೆಯಲ್ಲಿ ಸಕ್ರಮಾತಿಗೊಳಿಸಿರುವ ಆದೇಶವನ್ನು ಹಿಂಪಡೆಯಲು ಮಾನ್ಯ ಅನುಸೂಚಿತ ಜಾತಿ ಮತ್ತು ಅನುಸೂಚಿತ ಬುಡಕಟ್ಟುಗಳ ಆಯೋಗ ನೀಡಿರುವ ದಿನಾಂಕ: 02.03.2018ರ ನಿರ್ದೇಶನಕ್ಕೆ ಸಂಬಂಧಿಸಿದಂತೆ **"ವಾಣಿಜ್ಯ ತೆರಿಗೆಗಳ ಇಲಾಖೆಯಲ್ಲಿ ದಿನಾಂಕ: 10.08.2006 ಮತ್ತು 06.01.2007ರ ಆದೇಶಗಳನ್ವಯ ದಿನಗೂಲಿ ನೌಕರರ ಸೇವೆಯನ್ನು ಸಕ್ರಮಗೊಳಿಸಿರುವ ಆದೇಶವನ್ನು ಕರ್ನಾಟಕ ರಾಜ್ಯ ಆಡಳಿತ ನ್ಯಾಯ ಮಂಡಳಿ ಮತ್ತು ಗೌರವಾನ್ವಿತ ಉಚ್ಚ ನ್ಯಾಯಾಲಯಗಳು ಪರಿಗಣಿಸಿದ್ದು ಈ ರೀತಿ ಸಕ್ರಮಗೊಂಡ 11 ನೌಕರರ ಜೇಷ್ಠತೆ ಪ್ರಕರಣವನ್ನು ಪರಿಗಣಿಸುವಾಗ, ಕ್ರಮಬದ್ಧಗೊಳಿಸುವಿಕೆಯ ಆದೇಶವನ್ನು ಪುನರ್ ಪರಿಶೀಲಿಸಲು ಅಥವಾ ರದ್ದುಗೊಳಿಸಲು ಮಾನ್ಯ ನ್ಯಾಯ ಮಂಡಳಿ ಅಥವಾ ಮಾನ್ಯ ಉಚ್ಚ ನ್ಯಾಯಾಲಯ ರಾಜ್ಯ ಸರ್ಕಾರಕ್ಕೆ ಸ್ವತಂತ್ರವನ್ನು ಕಾಯ್ದಿರಿಸಿಲ್ಲ"**, ಎಂಬ ಮಾಹಿತಿಯನ್ನು ಆಯೋಗಕ್ಕೆ ನೀಡಲಾಗಿದೆ ಎಂಬ ಮಾಹಿತಿಯನ್ನು ಆರ್ಥಿಕ ಇಲಾಖೆ ಒದಗಿಸಿದೆ.

ಸಂಖ್ಯೆ: ಸಿಆಸುಇ 48 ಸೇಸ್ಥಲ 2021

(ಬಸವರಾಜ ಬೊಮ್ಮಾಯಿ)
ಮುಖ್ಯ ಮಂತ್ರಿಗಳು

ಕರ್ನಾಟಕ ಸರ್ಕಾರ

ಸಂಖ್ಯೆ: ಸಿಆಸುಇ 25 ಸೇಸ್ಥಅ 2003

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಧಾನಸೌಧ,
ಬೆಂಗಳೂರು, ದಿನಾಂಕ: 25ನೇ ಮೇ 2006.

ಸುತ್ತೋಲೆ

ವಿಷಯ: ದಿನಾಂಕ 1.7.84 ರ ನಂತರ ಸೇವೆಯಲ್ಲಿ ತೊಡಗಿಸಲಾದ ದಿನಗೂಲಿ ನೌಕರರ ಬಗ್ಗೆ.

* * *

ದಿನಾಂಕ 1.7.84 ರ ನಂತರ ತೊಡಗಿಸಲಾದ ದಿನಗೂಲಿ ನೌಕರರನ್ನು ಸಕ್ರಮಗೊಳಿಸುವ ಕುರಿತ ಸಿವಿಲ್ ಅಪೀಲು ಸಂಖ್ಯೆ: 3595-3612/99 ಮತ್ತು ಸಿವಿಲ್ ಅಪೀಲು ಸಂಖ್ಯೆ: 1861-2063/2001 ಮತ್ತಿತರ ಸಿವಿಲ್ ಅಪೀಲುಗಳಲ್ಲಿ ಮಾನ್ಯ ಸರ್ವೋಚ್ಚ ನ್ಯಾಯಾಲಯದ ಸಂವಿಧಾನ ಪೀಠವು ತನ್ನ ತೀರ್ಪನ್ನು ದಿನಾಂಕ 10.4.2006 ರಂದು ನೀಡಿದೆ. ಈ ತೀರ್ಪಿನಲ್ಲಿ ಸಕ್ರಮಾತಿಗೆ ಸಂಬಂಧಿಸಿದಂತೆ ಅನುಸರಿಸಬೇಕಾದ ಕಾನೂನನ್ನು ನಿಗದಿಪಡಿಸುತ್ತಾ ನ್ಯಾಯಾಲಯವು ಕೆಳಕಂಡಂತೆ ಗಮನಿಸಿದೆ:-

"...it is clear that adherence to the rule of equality in public employment is a basic feature of our Constitution and since the rule of law is the core of our Constitution, a Court would certainly be disabled from passing an order upholding a violation of Article 14 or in ordering the overlooking of the need to comply with the requirements of Article 14 read with Article 16 of the Constitution. Therefore, consistent with the scheme for public employment, this Court while laying down the law, has necessarily to hold that unless the appointment is in terms of the relevant rules and after a proper competition among qualified persons, the same would not confer any right on the appointee. If it is a contractual appointment, the appointment comes to an end at the end of the contract, if it were an engagement or appointment on daily wages or casual basis, the same would come to an end when it is discontinued. Similarly, a temporary employee

...2.

could not claim to be made permanent on the expiry of his term of appointment. It has also to be clarified that merely because a temporary employee or a casual wage worker is continued for a time beyond the term of his appointment, he would not be entitled to be absorbed in regular service or made permanent, merely on the strength of such continuance, if the original appointment was not made by following a due process of selection as envisaged by the relevant rules. Merely because, an employee had continued under cover of an order of Court, which we have described as 'litigious employment' in the earlier part of the judgement, he would not be entitled to any right to be absorbed or made permanent in the service."

---

2. ಮಂಜೂರಾದ ಖಾಲಿ ಹುದ್ದೆಗಳಲ್ಲಿ ಸೂಕ್ತ ಅರ್ಹತೆ ಹೊಂದಿರುವ ನೌಕರರನ್ನು ಅಕ್ರಮವಾಗಿ ನೇಮಕ (irregular appointment) ಮಾಡಿದ್ದು, ಅಂತಹ ನೌಕರರು 10 ವರ್ಷಗಳಿಗಿಂತ ಹೆಚ್ಚಿನ ಅವಧಿಗೆ ಸತತವಾಗಿ ಕಾರ್ಯನಿರ್ವಹಿಸಿದ್ದಲ್ಲಿ ಮತ್ತು ಅಂತಹ ನೌಕರರನ್ನು ನ್ಯಾಯಾಲಯಗಳ ಅಥವಾ ನ್ಯಾಯಮಂಡಳಿಗಳ ಆದೇಶಕ್ಕೊಳಪಟ್ಟು 10 ವರ್ಷಗಳಿಗಿಂತ ಹೆಚ್ಚಿನ ಅವಧಿಗೆ ಮುಂದುವರಿಸದೇ ಇದ್ದಲ್ಲಿ ಅಂತಹ ಅಕ್ರಮ ನೇಮಕಾತಿಗಳನ್ನು ರಾಜ್ಯ ಸರ್ಕಾರಗಳು ಮತ್ತು ಅವುಗಳ ಅಧೀನ ಸಂಸ್ಥೆಗಳು (instrumentalities of state) ಒಂದು ಬಾರಿಯ ಕ್ರಮವಾಗಿ ಸಕ್ರಮಗೊಳಿಸಲು ಯೋಗ್ಯತಾನುಸಾರ ಪರಿಗಣಿಸಿ ಕ್ರಮ ಕೈಗೊಳ್ಳಬೇಕೆಂದು ಸರ್ವೋಚ್ಛ ನ್ಯಾಯಾಲಯವು ನಿರ್ದೇಶಿಸಿದೆ. ಅಲ್ಲದೆ ಮಂಜೂರಾದ ಹುದ್ದೆಗಳು ಖಾಲಿಯಿದ್ದು, ಆ ಹುದ್ದೆಗಳಲ್ಲಿ ~~ಅಕ್ರಮವಾಗಿ~~ [illegible] ದಿನಗೂಲಿ ಅಥವಾ ಸಾಂದರ್ಭಿಕ ನೌಕರರು ಈಗ ಕಾರ್ಯನಿರ್ವಹಿಸುತ್ತಿದ್ದಲ್ಲಿ ಮತ್ತು ಆ ಹುದ್ದೆಗಳನ್ನು ತುಂಬುವುದು ಅಗತ್ಯವಾಗಿದ್ದಲ್ಲಿ ಅವುಗಳನ್ನು ನಿಯಮಾನುಸಾರ ನೇಮಕಾತಿ ಮಾಡುವ ಮುಖೇನ ತುಂಬತಕ್ಕದ್ದೆಂದು ಸರ್ವೋಚ್ಛ ನ್ಯಾಯಾಲಯವು ಆದೇಶಿಸಿದೆ. ಈ ಪ್ರಕ್ರಿಯೆಯನ್ನು ಸರ್ವೋಚ್ಛ ನ್ಯಾಯಾಲಯದ ತೀರ್ಪಿನ ದಿನಾಂಕದ 6 ತಿಂಗಳೊಳಗೆ ಪ್ರಾರಂಭಿಸಬೇಕೆಂದೂ ಆದೇಶಿಸಲಾಗಿದೆ.

...3.

3. ಈಗಾಗಲೇ ಸಕ್ರಮಾತಿ ಮಾಡಲಾದ ಪ್ರಕರಣಗಳು ಮತ್ತು ಸದ್ಯ ನ್ಯಾಯಾಲಯಗಳ ಪರಿಶೀಲನೆಯಲ್ಲಿಲ್ಲದ (not subjudice) ಪ್ರಕರಣಗಳನ್ನು ಈ ತೀರ್ಪಿನ ಹಿನ್ನೆಲೆಯಲ್ಲಿ ಪುನರ್ಪರಿಶೀಲನೆಗೆ ಒಳಪಡಿಸುವ ಅಗತ್ಯವಿಲ್ಲವೆಂದು ಸ್ಪಷ್ಟೀಕರಿಸುತ್ತಾ, ಇನ್ನು ಮುಂದೆ ಸಂವಿಧಾನಾತ್ಮಕ ಅಗತ್ಯತೆಯನ್ನು ಕಡೆಗಣಿಸಿ ಯಾವುದೇ ನೇಮಕಾತಿ ಮಾಡಬಾರದೆಂದೂ ಮತ್ತು ಸಂವಿಧಾನಾತ್ಮಕವಾದ ವಿಧಾನದನುಸಾರ ನೇಮಕಗೊಳ್ಳದ ವ್ಯಕ್ತಿಗಳ ಸೇವೆಯನ್ನು ಸಕ್ರಮಗೊಳಿಸಲು ಅಥವಾ ಅವರ ಸೇವೆಯನ್ನು ಖಾಯಂಗೊಳಿಸಲು ಕ್ರಮ ಕೈಗೊಳ್ಳಬಾರದೆಂದು ಆದೇಶಿಸಿದೆ.

4. ಕೈಗಾರಿಕಾ ವಿವಾದ ಕಾಯ್ದೆಯಲ್ಲಿ ಪರಿಭಾಷಿಸಿರುವಂತೆ 240 ದಿನಗಳ ಸತತ ಸೇವೆಯನ್ನು ಸಲ್ಲಿಸಿದ ದಿನಗೂಲಿ/ಸಾಂದರ್ಭಿಕ ನೌಕರರನ್ನು ಸೇವೆಯಿಂದ ತೆಗೆದು ಹಾಕದಂತೆ ಕರ್ನಾಟಕ ಉಚ್ಚ ನ್ಯಾಯಾಲಯವು ರಿಟ್ ಅರ್ಜಿ ಸಂಖ್ಯೆ: 8192/90 ರಲ್ಲಿ ದಿನಾಂಕ 11.4.90 ರಂದು ನಿರ್ದೇಶಿಸಿತ್ತು ಎಂಬ ಅಂಶವನ್ನು ಸಂಬಂಧಪಟ್ಟವರೆಲ್ಲರ ಗಮನಕ್ಕೆ ಈ ಸಂದರ್ಭದಲ್ಲಿ ತರಲಾಗಿದೆ. ಅಲ್ಲದೆ ದಿನಾಂಕ 1.7.84 ರ ನಂತರ ನೇಮಕಗೊಂಡು ಸರ್ಕಾರದ ವಿವಿಧ ಇಲಾಖೆಗಳು, ಜಿಲ್ಲಾ ಪಂಚಾಯತ್‌ಗಳು ಮತ್ತು ಸ್ಥಳೀಯ ಸಂಸ್ಥೆಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ದಿನಗೂಲಿ ನೌಕರರನ್ನು ಸೇವೆಯಿಂದ ತೆಗೆದು ಹಾಕುವುದನ್ನು ತಡೆಹಿಡಿದು ರಿಟ್ ಅರ್ಜಿ ಸಂಖ್ಯೆ: 12610/93 ರಲ್ಲಿ ಕರ್ನಾಟಕ ಉಚ್ಚ ನ್ಯಾಯಾಲಯವು ದಿನಾಂಕ 23.4.93 ರಂದು ಆದೇಶಿಸಿತ್ತು. ಹೀಗಾಗಿ ದಿನಾಂಕ 1.7.84 ರ ನಂತರ ನೇಮಕಗೊಂಡ ದಿನಗೂಲಿ ನೌಕರರನ್ನು ಕರ್ನಾಟಕ ಉಚ್ಚ ನ್ಯಾಯಾಲಯದ ಆದೇಶಕ್ಕೊಳಪಟ್ಟು ಮುಂದುವರಿಸಲಾಗಿದೆ.

5. ದಿನಾಂಕ 1.7.84 ರ ನಂತರ ಸೇವೆಯಲ್ಲಿ ತೊಡಗಿಸಲಾದ ದಿನಗೂಲಿ ನೌಕರರ ಪ್ರಕರಣಗಳ ಕುರಿತು ಪ್ರತಿಯೊಂದು ಇಲಾಖೆಯಲ್ಲಿನ ನೇಮಕಾತಿ ಪ್ರಾಧಿಕಾರಗಳು ಸರ್ವೋಚ್ಚ ನ್ಯಾಯಾಲಯದ ಮೇಲ್ಕಂಡ ಸೂಚನೆಗಳ ಹಿನ್ನೆಲೆಯಲ್ಲಿ ಮತ್ತು ಹಿಂದಿನ ಪ್ಯಾರಾ 4 ರ ಹಿನ್ನೆಲೆಯಲ್ಲಿ ಪರಿಗಣಿಸಿ ದಿನಗೂಲಿ ನೌಕರರನ್ನು ಮುಂದುವರಿಸಬೇಕೆ ಅಥವಾ ಬೇಡವೇ

ಎಂಬ ಬಗ್ಗೆ ಸೂಕ್ತ ತೀರ್ಮಾನವನ್ನು ತೆಗೆದುಕೊಳ್ಳಬೇಕು. ಯಾವುದಾದರೂ ಇಲಾಖೆಯು ಅಂತಹ ನೌಕರರ ಸೇವೆಯನ್ನು ಮುಂದುವರಿಸದೇ ಇರಲು ನಿರ್ಧಾರ ತೆಗೆದುಕೊಂಡಲ್ಲಿ, ಅಂತಹ ಕ್ರಮ ತೆಗೆದುಕೊಳ್ಳುವ ಮೊದಲು ಅಂತಹ ನೌಕರರಿಗೆ ಒಂದು ತಿಂಗಳಿಗೆ ಕಡಿಮೆ ಇಲ್ಲದ ನೋಟೀಸನ್ನು ನೀಡಬೇಕಾಗುತ್ತದೆ.

(ಬಿ.ಕೆ. ದಾಸ್)
ಸರ್ಕಾರದ ಮುಖ್ಯ ಕಾರ್ಯದರ್ಶಿ.

ಗೆ,

ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು.
ಸರ್ಕಾರದ ಎಲ್ಲಾ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು.
ಇಲಾಖಾ ಮುಖ್ಯಸ್ಥರು.
ಜಿಲ್ಲೆಗಳ ಜಿಲ್ಲಾಧಿಕಾರಿಗಳು.
ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಾಹಣಾಧಿಕಾರಿಗಳು.
ಸರ್ಕಾರದ ಅಪರ/ಸಹ/ಉಪ/ಅಧೀನ ಕಾರ್ಯದರ್ಶಿಗಳು.
ವಾರದ ಗೆಜೆಟ್.
ಶಾಖಾ ರಕ್ಷಾ ಕಡತ.

ಕರ್ನಾಟಕ ಸರ್ಕಾರ

ಸಂಖ್ಯೆ: ಸಿಆಸುಇ 25 ಸೇಸ್ಥಅ 2003 ಕರ್ನಾಟಕ ಸರ್ಕಾರದ ಸಚಿವಾಲಯ,

ವಿಧಾನಸೌಧ,

ಬೆಂಗಳೂರು. ದಿನಾಂಕ: 6ನೇ ಜುಲೈ 2006.

ಸುತ್ತೋಲೆ

ವಿಷಯ: ದಿನಾಂಕ 1.7.84 ರ ನಂತರ ಸೇವೆಯಲ್ಲಿ ತೊಡಗಿಸಲಾದ ದಿನಗೂಲಿ ನೌಕರರ ಬಗ್ಗೆ.

* * *

ದಿನಾಂಕ 1.7.84 ರ ನಂತರ ತೊಡಗಿಸಲಾದ ದಿನಗೂಲಿ ನೌಕರರ ಸಕ್ರಮಾತಿಯ ಕುರಿತಂತೆ ಸುತ್ತೋಲೆ ಸಂಖ್ಯೆ: ಸಿಆಸುಇ 25 ಸೇಸ್ಥಅ 2003 ದಿನಾಂಕ 25.5.2006 ರಲ್ಲಿ ಕೆಲವು ಸೂಚನೆಗಳನ್ನು ನೀಡಲಾಗಿದೆ. ಸದರಿ ಸುತ್ತೋಲೆಯ ಪ್ಯಾರಾ 5 ರಂತೆ ಸದ್ಯಕ್ಕೆ ಯಾವುದೇ ಕ್ರಮ ಕೈಗೊಳ್ಳಬಾರದೆಂದು ಹಾಗೂ ಸರ್ಕಾರದ ಮುಂದಿನ ಸೂಚನೆಯನ್ನು ನಿರೀಕ್ಷಿಸುವಂತೆ ಎಲ್ಲಾ ನೇಮಕಾತಿ ಪ್ರಾಧಿಕಾರಗಳಿಗೆ ಈ ಮೂಲಕ ತಿಳಿಸಲಾಗಿದೆ.

(ಬಿ.ಕೆ.ದಾಸ್)
ಸರ್ಕಾರದ ಮುಖ್ಯ ಕಾರ್ಯದರ್ಶಿ.

ಗೆ,

ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು.
ಸರ್ಕಾರದ ಎಲ್ಲಾ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು.
ಇಲಾಖಾ ಮುಖ್ಯಸ್ಥರು.
ಜಿಲ್ಲೆಗಳ ಜಿಲ್ಲಾಧಿಕಾರಿಗಳು.
ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು.
ಸರ್ಕಾರದ ಅಪರ/ಸಹ/ಉಪ/ಅಧೀನ ಕಾರ್ಯದರ್ಶಿಗಳು.
ವಾರದ ಗೆಜೆಟ್.
ಶಾಖಾ ರಕ್ಷಾ ಕಡತ.

ಪ್ರಕರಣದ ವಿಚಾರಣೆ ನಡೆಸಿದ ವಿಚಾರಣಾಧಿಕಾರಿಗಳು ಮೇಲೆ ಕ್ರ.ಸ.(2)ರಂತೆ ವಿಚಾರಣಾ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಿದ್ದು, ಆರೋಪಿತರುಗಳ ಮೇಲೆ ಹೊರಿಸಲಾದ ಆರೋಪಗಳು ಸಾಬೀತಾಗಿರುವುದಿಲ್ಲವೆಂದು ಅಭಿಪ್ರಾಯಪಟ್ಟಿರುತ್ತಾರೆ. ವಿಚಾರಣಾಧಿಕಾರಿಗಳ ವರದಿ ವಿಚಾರಣಾ ಕಡತ/ದಾಖಲೆಗಳನ್ನು ಸರ್ಕಾರವು ಕೂಲಂಕಷವಾಗಿ ಪರಿಶೀಲಿಸಿ ಶ್ರೀ ಕೆ.ಎಸ್. ರಾಮಾಂಜನಪ್ಪ, ತಹಶೀಲ್ದಾರ್ ಹಾಗೂ ಶ್ರೀಮತಿ ಕೆ.ಎಸ್. ಪ್ರೇಮಲತಾ ಶೆಟ್ಟಿ, ದ್ವಿ.ದ.ಸಹಾಯಕರು ಇವರುಗಳ ಮೇಲೆ ಹೊರಿಸಲಾದ ಆರೋಪಗಳು ಸಾಬೀತಾಗಿಲ್ಲದಿರುವ ವಿಚಾರಣಾಧಿಕಾರಿಗಳ ವರದಿಯನ್ನು ಒಪ್ಪಿ ಸದರಿಯವರುಗಳನ್ನು ಆರೋಪ ಮುಕ್ತರನ್ನಾಗಿಸಲು ತೀರ್ಮಾನಿಸಿ ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರಿ ಆದೇಶ ಸಂಖ್ಯೆ: ಕಂ.ಇ. 57 ಎಡಿಇ 2001, ಬೆಂಗಳೂರು, ದಿನಾಂಕ: 18ನೇ ಸೆಪ್ಟೆಂಬರ್ 2006

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ ಶ್ರೀ ಕೆ.ಎಸ್. ರಾಮಾಂಜನಪ್ಪ, ಹಿಂದಿನ ತಹಶೀಲ್ದಾರ್, ಬೆಂಗಳೂರು ಉತ್ತರ ತಾಲ್ಲೂಕು ಹಾಲಿ ತಹಶೀಲ್ದಾರ್ ಪ್ರಾದೇಶಿಕ ಆಯುಕ್ತರ ಕಛೇರಿ (ಕಂದಾಯ) ಬೆಂಗಳೂರು ಮತ್ತು ಶ್ರೀಮತಿ ಕೆ.ಎಸ್. ಪ್ರೇಮಲತಾಶೆಟ್ಟಿ, ದ್ವಿ.ದ.ಸಹಾಯಕಿ ಬೆಂಗಳೂರು ಉತ್ತರ ತಾಲ್ಲೂಕು ಇವರುಗಳ ವಿರುದ್ಧ ಸರ್ಕಾರದ ಆದೇಶ ಸಂಖ್ಯೆ ಕಂ.ಇ. 57 ಎಡಿಇ 2001, ದಿನಾಂಕ: 22.2.2005ರ ಆದೇಶದಲ್ಲಿ ಹೊರಡಿಸಲಾದ ಆರೋಪಗಳಿಂದ ಮುಕ್ತಗೊಳಿಸಿ ಆದೇಶಿಸಿದೆ.

ಈ ಪ್ರಕರಣದ ಮಟ್ಟಿಗೆ ಸಂಬಂಧಿಸಿದಂತೆ ಮೇಲ್ಕಂಡ ಅಧಿಕಾರಿ/ನೌಕರರುಗಳ ವಿರುದ್ಧ ಈ ಇಲಾಖಾ ವಿಚಾರಣೆಯು ನಡೆಯದಿದ್ದಲ್ಲಿ ಅವರು ಯಾವ ಸೌಲಭ್ಯಗಳನ್ನು ಪಡೆಯಲು ಅರ್ಹರಾಗಿರುತ್ತಿದ್ದರೋ ಅಂತಹ ಸೇವಾ ಸೌಲಭ್ಯಗಳನ್ನು ಪಡೆಯಲು ಅರ್ಹರಿರುತ್ತಾರೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ಆರ್. ಶ್ರೀಮತಿ ಚಂದ್ರಶೇಖರ್

ಸರ್ಕಾರದ ಅಧೀನ ಕಾರ್ಯದರ್ಶಿ,

ಕಂದಾಯ ಇಲಾಖೆ (ಸೇವೆಗಳು-3)

ಪಿ.ಆರ್. 1528

ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಸಚಿವಾಲಯ

ಸುತ್ತೋಲೆ

ಸಂಖ್ಯೆ: ಸಿಆಸುಇ 25 ಸೇಸ್ಥಅ 2003 (ಭಾ), ಬೆಂಗಳೂರು, ದಿನಾಂಕ: 13ನೇ ನವೆಂಬರ್ 2006

ವಿಷಯ: ದಿನಾಂಕ: 1.7.84ರ ನಂತರ ಸೇವೆಯಲ್ಲಿ ತೊಡಗಿಸಲಾದ ದಿನಗೂಲಿ ನೌಕರರ ಬಗ್ಗೆ.

ಉಲ್ಲೇಖ: ಸುತ್ತೋಲೆ ಸಂಖ್ಯೆ: ಸಿಆಸುಇ 25 ಸೇಸ್ಥಅ 2003 ದಿನಾಂಕ: 25.5.2006 ಮತ್ತು 6.7.2006.

ದಿನಾಂಕ: 1.7.84ರ ನಂತರ ತೊಡಗಿಸಲಾದ ದಿನಗೂಲಿ ನೌಕರರನ್ನು ಸಕ್ರಮಗೊಳಿಸುವ ಕುರಿತ ಸಿವಿಲ್ ಅಪೀಲು ಸಂಖ್ಯೆ: 3595-3612/99 ಮತ್ತು ಸಿವಿಲ್ ಅಪೀಲು ಸಂಖ್ಯೆ: 1861-2063/2001 ಮತ್ತಿತರ ಮತ್ತು ಸಿವಿಲ್ ಅಪೀಲುಗಳಲ್ಲಿ ಮಾನ್ಯ ಸರ್ವೋಚ್ಚ ನ್ಯಾಯಾಲಯದ ಸಂವಿಧಾನ ಪೀಠವು ದಿನಾಂಕ: 10.4.2006 ರಂದು ನೀಡಿದ ತೀರ್ಪಿನ ಹಿನ್ನೆಲೆಯಲ್ಲಿ ದಿನಾಂಕ: 25.5.2006ರ ಉಲ್ಲೇಖಿತ ಸುತ್ತೋಲೆಯನ್ನು ಹೊರಡಿಸಲಾಗಿದೆ. ಸದರಿ ಸುತ್ತೋಲೆಯ ಪ್ಯಾರಾ 2ರಲ್ಲಿ ಕೆಲವು ಷರತ್ತುಗಳನ್ನು ಪೂರೈಸಿದ ದಿನಗೂಲಿ ನೌಕರರ ಸೇವೆಯನ್ನು ಸಕ್ರಮಗೊಳಿಸಬಹುದೆಂದು ಹೇಳಲಾಗಿದೆ. ಈ ಸುತ್ತೋಲೆಯನ್ನು ಸರಿಯಾಗಿ ಅರ್ಥೈಸದೆ ಕೆಲವು ಇಲಾಖೆಗಳು ದಿನಗೂಲಿ ನೌಕರರನ್ನು ಸಕ್ರಮಗೊಳಿಸುತ್ತಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆ.

2. ದಿನಾಂಕ: 10.4.2006ರ ಸುಪ್ರೀಂ ಕೋರ್ಟ್‌ನ ತೀರ್ಪಿನ ಹಿನ್ನೆಲೆಯಲ್ಲಿ ಈ ಕೆಳಕಂಡ ನಾಲ್ಕು ಷರತ್ತುಗಳನ್ನು ಪೂರೈಸಿದ ದಿನಗೂಲಿ ನೌಕರರನ್ನು ಸಕ್ರಮಗೊಳಿಸಲು ಪರಿಗಣಿಸಬಹುದು

(1) ಅಂತಹ ನೌಕರರನ್ನು ಮೂಲತಃ ಮಂಜೂರಾದ ಖಾಲಿ ಹುದ್ದೆಯಲ್ಲಿ ನೇಮಕ ಮಾಡಿರಬೇಕು.

(2) ಹೀಗೆ ಅವರನ್ನು ನೇಮಕ ಮಾಡುವಾಗ ಅವರು ಸಂಬಂಧಿತ ಹುದ್ದೆಗೆ ನಿಗದಿಪಡಿಸಿರುವ ವಿದ್ಯಾರ್ಹತೆಯನ್ನು ಹೊಂದಿರಬೇಕು.

(3) ಹೀಗೆ ನೇಮಕಗೊಂಡಂತಹ ನೌಕರರು 10 ವರ್ಷಗಳಿಗೂ ಹೆಚ್ಚಿನ ಅವಧಿಗೆ ಸತತವಾಗಿ ಅದೇ ಹುದ್ದೆಯಲ್ಲಿ ಕಾರ್ಯ ನಿರ್ವಹಿಸಿರಬೇಕು.

(4) ನ್ಯಾಯಾಲಯಗಳ ಅಥವಾ ನ್ಯಾಯಮಂಡಳಿಗಳ ಆದೇಶಕ್ಕೊಳಪಟ್ಟು 10 ವರ್ಷಗಳಿಗೂ ಹೆಚ್ಚಿನ ಅವಧಿಗೆ ಅವರನ್ನು ಮುಂದುವರಿಸಿರಬಾರದು.

3. ಮೇಲ್ಕಂಡ ಷರತ್ತುಗಳಲ್ಲಿ ನಾಲ್ಕನೆಯ ಷರತ್ತೆಂದರೆ ನೌಕರರು 10 ವರ್ಷಗಳು ಅಥವಾ ಅದಕ್ಕೂ ಹೆಚ್ಚಿನ ಅವಧಿಗೆ ಮುಂದುವರಿದಿರುವುದು ನ್ಯಾಯಾಲಯಗಳು ಅಥವಾ ನ್ಯಾಯಾಧೀಕರಣಗಳ ಆದೇಶದಿಂದ ಆಗಿರಬಾರದು ಎಂಬುದು ("...... employees have continued to work for ten years or more but without the intervention of orders of courts of tribunals.") ಈ ಅಂಶಕ್ಕೆ ಸಂಬಂಧಿಸಿದಂತೆ ದಿನಾಂಕ:25.5.2006ರ ಉಲ್ಲೇಖಿತ ಸುತ್ತೋಲೆಯ ಪ್ಯಾರಾ 4ರಲ್ಲಿ ನೀಡಲಾದ ವಿವರಗಳೆಡೆಗೆ ಎಲ್ಲಾ ಇಲಾಖೆಗಳ ಗಮನವನ್ನು ಸೆಳೆಯಲಾಗಿದೆ. ಪ್ಯಾರಾ 4 ರಿಂದ ಸ್ಪಷ್ಟವಾಗುವುದೇನೆಂದರೆ, ಈ ದಿನಗೂಲಿ ನೌಕರರುಗಳನ್ನು ಮುಂದುವರಿಸಿರಲು ದಿನಾಂಕ: 11.4.90ಮತ್ತು 23.4.93 ರಿಂದ ಉಚ್ಚ ನ್ಯಾಯಾಲಯವು ನೀಡಿದ ಆದೇಶಗಳು ಕಾರಣವಾಗಿವೆ. ಈ ಆದೇಶಗಳಿಂದಾಗಿ ದಿನಾಂಕ: 1.7.84ರ ನಂತರ ನೇಮಕಗೊಂಡ ದಿನಗೂಲಿ ನೌಕರರನ್ನು ಸೇವೆಯಲ್ಲಿ ಮುಂದುವರಿಸಲಾಗಿದೆ. ಆದುದರಿಂದ, ರಾಜ್ಯದಲ್ಲಿರುವ ಬಹುಪಾಲು ದಿನಗೂಲಿ ನೌಕರರ ನ್ಯಾಯಾಲಯದ ಈ ಆದೇಶಗಳಿಂದ ಮುಂದುವರಿದಿರುವುದರಿಂದ ಅವರು ಸುಪ್ರೀಂ ಕೋರ್ಟ್ ನಿಗದಿಪಡಿಸಿದ ನಾಲ್ಕನೆಯ ಷರತ್ತನ್ನು ಪೂರೈಸಿದಂತಾಗುವುದಿಲ್ಲ. ಹೀಗಾಗಿ ಅವರು ಸಕ್ರಮಾತಿಗೆ ಅರ್ಹರಾಗುವುದಿಲ್ಲ.

4. ಮೇಲ್ಕಂಡ ಅಂಶದ ಹಿನ್ನೆಲೆಯಲ್ಲಿ ದಿನಾಂಕ: 10.4.2006ರ ನಂತರ ಯಾವುದಾದರೂ ಇಲಾಖೆಯು ದಿನಗೂಲಿ ನೌಕರರನ್ನು ಸಕ್ರಮಗೊಳಿಸಿದ್ದಲ್ಲಿ ಅಂತಹ ಪ್ರಕರಣಗಳನ್ನು ಮೇಲ್ಕಂಡ ಸ್ಪಷ್ಟೀಕರಣದ ಹಿನ್ನೆಲೆಯಲ್ಲಿ ಪುನರ್ ಪರಿಶೀಲಿಸಿ ಅಂತಹ ಸಕ್ರಮಾತಿ ಆದೇಶಗಳು ಸುಪ್ರೀಂ ಕೋರ್ಟ್ ತೀರ್ಪಿನ ಅನುಗುಣವಾಗಿಲ್ಲದಿದ್ದಲ್ಲಿ ಅವುಗಳನ್ನು ಹಿಂಪಡೆಯಲು ಕ್ರಮ ಕೈಗೊಳ್ಳಬೇಕೆಂದು ತಿಳಿಸಲಾಗಿದೆ.

ಸೈಯದ್ ಜಮೀರ್ ಪಾಷಾ

ಸರ್ಕಾರದ ಕಾರ್ಯದರ್ಶಿ,

ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ.

ಪಿ.ಆರ್. 1610